ಬಸವ ವಸತಿ ಯೋಜನೆಯಡಿಯಲ್ಲಿ ಅನುದಾನ ಬಿಡುಗಡೆಯಾಗದೇ ಇರುವ ಬಗ್ಗೆ

608(782), ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಹಾಗೂ ಖಾಸಗಿ ಪ್ರೌಢಶಾಲೆಗಳ ಸಂಖ್ಯೆ ಎಷ್ಟು;

ಆ) ಜಿಲ್ಲೆಯು ಸತತವಾಗಿ 10 ತರಗತಿ ಫಲಿತಾಂಶದಲ್ಲಿ ಕೊನೆಯ ಸ್ಥಾನದಲ್ಲಿ ಬರುತ್ತಿರುವುದಕ್ಕೆ ಕಾರಣಗಳೇನು;

ಇ) ಕಳೆದ 3 ವರ್ಷಗಳಲ್ಲಿ ಜಿಲ್ಲೆಯಲ್ಲಿ ಬಂದಿರುವ ಫಲಿತಾಂಶದ ವಿವರ ನೀಡುವುದು; ಅತೀ ಕಳಪೆ ಫಲಿತಾಂಶ ಬಂದಿರುವ ಪ್ರೌಢಶಾಲೆಗಳ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳುವುದೇ;

ಈ) ಜಿಲ್ಲೆಯಲ್ಲಿ ಶೈಕ್ಷಣಿಕ ಸುಧಾರಣೆಗಾಗಿ ಸರ್ಕಾರ ವಿಶೇಷ ಯೋಜನೆಯನ್ನು ರೂಪಿಸಲು ಕ್ರಮ ಕೈಗೊಳ್ಳುವುದೇ?

ಶ್ರೀ ಕಿಮ್ಮನೆ ರತ್ನಾಕರ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಬೀದರ್ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಹಾಗೂ ಖಾಸಗಿ ಪ್ರೌಢಶಾಲೆಗಳ ಸಂಖ್ಯೆ ಈ ಕೆಳಗಿನಂತಿದೆ:–

1. ಸರ್ಕಾರಿ ಶಾಲೆಗಳು – 156.

2. ಖಾಸಗಿ ಪ್ರೌಢ ಶಾಲೆಗಳು – 329.

ಆ) ವಿಷಯವಾರು ಶಿಕ್ಷಕರ ಕೊರತೆ, ಮುಖ್ಯ ಶಿಕ್ಷಕರ ಖಾಲಿ ಹುದ್ದೆಗಳು, ಬಹುಮಾಧ್ಯಮ ಪ್ರೌಢಶಾಲೆಗಳು, ಭಾಷಾ ಸಮಸ್ಯೆ, ಆರ್ಥಿಕ ಪರಿಸ್ಥಿತಿ ಬಡತನ ಕಾರಣದಿಂದ ಪೋಷಕರು ಮಕ್ಕಳೊಂದಿಗೆ ವಲಸೆ, ಮಕ್ಕಳ ಗೈರುಹಾಜರಿ.

ಇ) ಕಳೆದ 3 ವರ್ಷಗಳಲ್ಲಿ ಜಿಲ್ಲೆಯಲ್ಲಿ ಬಂದಿರುವ ಫಲಿತಾಂಶದ ವಿವರ ಈ ಕೆಳಕಂಡಂತಿದೆ:–

ಕ್ರ. ಸಂ.		2012	2013	2014
1	ಹಾಜರಾತಿ	21,151	22,047	22,786
2	ಉತ್ತೀರ್ಣ	13,393	14,981	17,169
3	ಫಲಿತಾಂಶ	63.72%	67.95%	73.35%

ಅತೀ ಕಳಪೆ ಫಲಿತಾಂಶ ಬಂದಿರುವ ಪ್ರೌಢಶಾಲೆಗಳ ವಿರುದ್ಧ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.

ಈ) ಇಲ್ಲ.

ರಸ್ತೆ ದುರಸ್ತಿಗೆ ಅನುದಾನ ಬಿಡುಗಡೆ

609(784): ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)

ಅ) ಬೀದರ್ ಜಿಲ್ಲೆ ಭಾಲ್ಕಿ ತಾಲ್ಲೂಕಿನಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ವ್ಯಾಪ್ತಿಗೆ ಎಷ್ಟು ಕಿ.ಮೀ. ರಸ್ತೆಗಳು ಬರುತ್ತವೆ; (ವಿವರ ನೀಡುವುದು)

ಆ) ಈ ರಸ್ತೆಗಳು ಶೇಕಡ 80ರಷ್ಟು ಹಾಳಾಗಿದ್ದು ಇದರಿಂದ 25 ಹಳ್ಳಿಗಳು ಸಂಪರ್ಕದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಸದರಿ ರಸ್ತೆಗಳನ್ನು ಕನಿಷ್ಠ ಮೊಟರೆಬಲ್ ಮಾಡಲು ಅನುದಾನ ಬಿಡುಗಡೆ ಮಾಡಿ ರಸ್ತೆ ಸುಧಾರಣೆ ಮಾಡಲಾಗುವುದೇ?